1.ವರದಿಯನ್ನೊಪ್ಪಿಸುವುದು

(i) ಖಾಸಗಿ ಸದಸ್ಯರುಗಳ ವಿಧೇಯಕ ಮತ್ತು ನಿರ್ಣಯಗಳ ಸಮಿತಿಯ ಮೊದಲನೇ ವರದಿ

(ii) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಹತ್ತೊಂಭತ್ತನೇ ವರದಿ.

ಶ್ರೀ ಕೆ.ಜಿ. ಬೋಪಯ್ಯ(ವಿರಾಜಪೇಟೆ): ಮಾನ್ಯ ಅಧ್ಯಕ್ಷರೇ, ಖಾಸಗಿ ಸದಸ್ಯರುಗಳ ವಿಧೇಯಕ ಮತ್ತು ನಿರ್ಣಯಗಳ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸುತ್ತೇನೆ.

ಶ್ರೀಮತಿ ಸೀಮಾ ಅಶೋಕ ಮಸೂತಿ(ಧಾರವಾಡ): ಮಾನ್ಯ ಅಧ್ಯಕ್ಷರೇ, ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಸಿದ್ಧ ಉಡುಪುಗಳ, ಡಿಸ್ಟಿಲರೀಸ್, ಬ್ರೂವರೀಸ್ ಇತ್ಯಾದಿ ಘಟಕಗಳಲ್ಲಿ ಕೆಲಸ ಮಾಡುತ್ತಿರುವ ಮಹಿಳಾ ಕಾರ್ಮಿಕರ ಶೋಷಣೆಗೆ ಸಂಬಂಧಪಟ್ಟಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಹತ್ತೊಂಭತ್ತನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ವರದಿಯನ್ನು ಮಂಡಿಸಲಾಯಿತು.

2.ಚುನಾವಣಾ ಪ್ರಸ್ತಾವ

ವಿಷಯ: ಕರ್ನಾಟಕ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಮೂವರು ಸದಸ್ಯರುಗಳನ್ನು ಚುನಾಯಿಸುವ ಬಗ್ಗೆ

ಶ್ರೀ ಗೋವಿಂದ ಎಂ. ಕಾರಜೋಳ(ಸಣ್ಣ ನೀರಾವರಿ ಸಚಿವರು): ಮಾನ್ಯ ಅಧ್ಯಕ್ಷರೇ, ಮಾನ್ಯ ಸುರೇಶ್ ಕುಮಾರ್‌ರವರ ಪರವಾಗಿ 1965ರ ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯ್ದೆ ಕಲಂ–3ರ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಮೂವರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"1956 ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯ್ದೆ ಕಲಂ–3ರ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಮೂವರು ಸದಸ್ಯರನ್ನು ಚುನಾಯಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

3.ವಿತ್ತೀಯ ಕಾರ್ಯಕಲಾಪಗಳು

ಮಂಡನೆ.

ಅ) 2008–09ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು)

ಶ್ರೀ ಬಿ.ಎಸ್. ಯಡಿಯೂರಪ್ಪ(ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೇ, 2008–09ನೇ ಸಾಲಿನ ಪೂರಕ ಅಂದಾಜುಗಳನ್ನು(ಎರಡನೇ ಕಂತು) ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು. (ಅನುಬಂಧ–1)

ಅಧ್ಯಕ್ಷರು: ಮಂಡಿಸಲಾಯಿತು.

(ಆ) 2009–10ನೇ ಸಾಲಿನ ಆಯವ್ಯಯದ ಮೇಲಿನ ಮುಂದುವರೆದ ಚರ್ಚೆ

ಶ್ರೀ ಹೆಚ್.ಡಿ. ಕುಮಾರಸ್ವಾಮಿ(ರಾಮನಗರ): ಮಾನ್ಯ ಅಧ್ಯಕ್ಷರೇ, ಈ ದಿನ ಆಯವ್ಯಯದ ಬಗ್ಗೆ ಚರ್ಚೆಯಲ್ಲಿ ಭಾಗವಹಿಸುವುದಕ್ಕೆ ನನಗೆ ಅವಕಾಶವನ್ನು ಕೊಟ್ಟಿರುವುದಕ್ಕೆ ತಮಗೆ ವಂದನೆಗಳನ್ನು ಸಲ್ಲಿಸುವುದಕ್ಕೆ ಬಯಸುತ್ತೇನೆ. 2009–10ನೇ ಸಾಲಿನ ಆಯವ್ಯಯದ ವಿಚಾರದಲ್ಲಿ ಈಗಾಗಲೇ ಸದನದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರು, ಹಲವಾರು ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರುಗಳು ಚರ್ಚೆಯನ್ನು ಮಾಡಿರುವುದನ್ನು ನಾವು ಈಗಾಗಲೇ ಗಮನಿಸಿದ್ದೇವೆ. ಈ ಒಂದು ಆಯವ್ಯಯವನ್ನು ಮಂಡನೆ ಮಾಡುವಂತಹ ಸಂದರ್ಭದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಮೊದಲನೇ ಪುಟದಲ್ಲಿ ಆತ್ಮವಿಶ್ವಾಸದಿಂದ ಹೇಳಿದ್ದಾರೆ. ಸ್ಥಿರತೆ ಮತ್ತು ಅಭಿವೃದ್ಧಿಗಾಗಿ ಮೊನ್ನೆ ನಡೆದಂತಹ ಉಪ ಚುನಾವಣೆಗಳಲ್ಲಿ ಈ ರಾಜ್ಯದ ಜನತೆ ನಮಗೆ ಆಶೀರ್ವಾದ ಮಾಡಿದ್ದಾರೆ. ಅದರಿಂದ ಈ ಸರ್ಕಾರಕ್ಕೆ ಸ್ಥಿರತೆ ಬಂದಿದೆ ಎನ್ನುವ ಮಾತನ್ನು ಸದನದಲ್ಲಿ ಹೇಳಿದರು. ಆದರೆ ಹಲವಾರು ಸಂದರ್ಭದಲ್ಲಿ ಸಾರ್ವಜನಿಕ ಸಭೆಗಳಲ್ಲಿ ನನ್ನ ಕುರ್ಚಿ ಅಲುಗಾಡುತ್ತಿದೆ ಎನ್ನುವ ಸಂಗತಿಯನ್ನು ಅವರೇ ವ್ಯಕ್ತಪಡಿಸಿದ್ದಾರೆ. ಅವರು ಈ ವಿಚಾರವನ್ನು ಯಾವ ದೃಷ್ಟಿಯಿಂದ ಸದನದ ಹೊರಗೆ ಎರಡು ಮೂರು ಬಾರಿ ಪ್ರಸ್ತಾಪ ಮಾಡಿದ್ದರೆ ಎನ್ನುವುದು ನನಗೆ ಅರ್ಥವಾಗದೆ ಇರುವಂತಹ ಸಂಗತಿ. ಸದನದಲ್ಲಿ ಇಷ್ಟು ಆತ್ಮವಿಶ್ವಾಸದಿಂದ ಹೇಳತಕ್ಕವರು, ಸದನದ ಹೊರಗಡೆ ಎರಡು ಮೂರು ಸಾರ್ವಜನಿಕ ಸಭೆಗಳಲ್ಲಿ ಅವರು ವ್ಯಕ್ತಪಡಿಸಿರುವಂತಹ ಅಭಿಪ್ರಾಯವನ್ನು ನೋಡಿದಾಗ ಎಲ್ಲೋ ಒಂದು ಕಡೆ ಹಳಿ ತಪ್ಪಿರಬಹುದು ಎನ್ನುವುದನ್ನು ನಾವು ಅವರ ಈ ದ್ವಂದ್ವ ನಿಲುವಿನಿಂದ ಗಮನಿಸಬಹುದು ಎನ್ನುವುದನ್ನು ಈ ಸಂದರ್ಭದಲ್ಲಿ ನಾನು ವ್ಯಕ್ತಪಡಿಸುವುದಕ್ಕೆ ಇಚ್ಛೆಪಡುತ್ತೇನೆ. ಅವರು ಬಜೆಟ್ ಪುಸ್ತಕದ ಮೊದಲನೇ ಪುಟದಲ್ಲಿ 'ನಮ್ಮ ಕನಸಿನ ರಾಮ ರಾಜ್ಯದಲ್ಲಿ ಭಿಕ್ಷುಕನಿಗೂ, ಭೂಪತಿಗೂ ಸರಿಸಮಾನವಾದ ಹಕ್ಕುಗಳು ದೊರೆಯುವುವು' ಎನ್ನುವ ಮಾತನ್ನು ಅವರು ಏನು ವ್ಯಕ್ತಪಡಿಸಿದ್ದಾರೆ, ಅದು